ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	252 (254)
ಮಾನ್ಯ ಸದಸ್ಯರ ಹೆಸರು	ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	17/02/2022
ಉತ್ತರಿಸುವವರು	ಮಾನ್ಯ ಕಾರ್ಮಿಕ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಸರ್ಕಾರವು ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯನ್ನು ಸ್ಥಾಪಿಸಿರುವುದು ನಿಜವೇ; ಪ್ರಸ್ತುತ ಲಕ್ಷಾಂತರ ಕಟ್ಟಡ ಕಾರ್ಮಿಕರು ಕೋವಿಡ್-19ರ ಪ್ರಭಾವದಿಂದಾಗಿ ಕೆಲಸ ಕಳೆದುಕೊಂಡಿದ್ದು, ಇಂತಹ ಎಷ್ಟು ಕಾರ್ಮಿಕರಿಗೆ ಇಂತಹ ನೆರವನ್ನು ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗಿದೆ;	ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳ ವೆಚ್ಚದ ಮೇಲೆ ಶೆ.1 ರಷ್ಟು ಸಂಗ್ರಹವಾಗುವ ಸುಂಕ ಮೊತ್ತದ ನಿರ್ವಹಣೆಗಾಗಿ ಸುಂಕ ನಿಧಿಯನ್ನು ಸ್ಥಾಪಿಸಲಾಗಿದೆ. ಈ ಸುಂಕ ನಿಧಿಯಿಂದ ಕೋವಿಡ್-19 ರ ಒಂದನೇ ಆಲೆ ಮತ್ತು ಎರಡನೇ ಆಲೆಯಿಂದಾಗಿ ಸಂಕಷ್ಟಕ್ಕೊಳಗಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಭದ್ರತೆಗಾಗಿ ಮಂಡಳಿಯ ವತಿಯಿಂದ ಈ ಕೆಳಕಂಡ ಪರಿಹಾರಗಳನ್ನು ನೀಡಲಾಗಿದೆ. ಒಂದನೇ ಆಲೆ ಸಂದರ್ಭದಲ್ಲಿ: 1. ಮಾನ್ಯ ಮುಖ್ಯಮಂತ್ರಿಗಳ ಘೋಷಣೆಯಂತೆ 16,48,431 ಮಂಡಳಿಯ ಫಲಾನುಭವಿಗಳಿಗೆ ತಲಾ ರೂ.5,000/- ಗಳಂತೆ ಒಟ್ಟು ರೂ.824.21ಕೋಟಿ ಸಹಾಯಧನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ (DBT) ಜಮಾ ಮಾಡಲಾಗಿರುತ್ತದೆ. 2. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 7.15 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್ ಗಳನ್ನು ತಯಾರಿಸಿ ವಿತರಿಸಲಾಗಿರುತ್ತದೆ.

		3. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಲಾಕ್‌ಡೌನ್ ಪ್ರಾರಂಭದಿಂದ ಇದುವರೆಗೂ 89.87 ಲಕ್ಷ ಸಿದ್ಧಪಡಿಸಿದ ಆಹಾರದ ಪ್ಯಾಕೆಟ್ ಗಳನ್ನು ವಿತರಿಸಲಾಗಿರುತ್ತದೆ. ಎರಡನೇ ಅಲೆಯ ಸಂದರ್ಭದಲ್ಲಿ 1. ತಲಾ ರೂ.3,000/- ಗಳಂತೆ ಸುಮಾರು 19,02,018 ಕಾರ್ಮಿಕರಿಗೆ ಒಟ್ಟು ರೂ.570.60 ಕೋಟಿ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (DBT) ಮೂಲಕ ಜಮಾ ಮಾಡಲಾಗಿದೆ. ಉಳಿದ ಫಲಾನುಭವಿಗಳಿಗೆ ಬ್ಯಾಂಕ್‌ಖಾತೆಗೆ ರೂ. 3,000/- ಗಳನ್ನು ಜಮಾ ಮಾಡಲು ಕ್ರಮವಹಿಸಲಾಗುತ್ತಿದೆ. 2. ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಆಹಾರ ಸಮಸ್ಯೆಯನ್ನು ನೀಗಿಸಲು ರಾಜ್ಯಾದ್ಯಂತ 23.42 ಲಕ್ಷ ಕಾರ್ಮಿಕರಿಗೆ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿದೆ. 3. ಮಂಡಳಿಯ ವತಿಯಿಂದ ನೋಂದಾಯಿತ ಅಸಂಘಟಿತ ಕಾರ್ಮಿಕರಿಗೆ ಸಮಸ್ಯೆಯನ್ನು ನೀಗಿಸಲು ರಾಜ್ಯಾದ್ಯಂತ 3.80 ಲಕ್ಷ ಕಾರ್ಮಿಕರಿಗೆ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿದೆ. 4. ನೋಂದಾಯಿತ ಅರ್ಹ 21.07 ಲಕ್ಷ ಕಾರ್ಮಿಕರಿಗೆ ಸುರಕ್ಷತಾ ಮತ್ತು ನೈರ್ಮಲ್ಯ ಕಿಟ್‌ಗಳನ್ನು ವಿತರಿಸಲಾಗಿದೆ.
ಆ)	ಈ ನಿಧಿಯಲ್ಲಿ ಎಷ್ಟು ಪ್ರಮಾಣದ ಹಣ ಸಂಗ್ರಹವಾಗುತ್ತಿದೆ; ಅದರ ಬಳಕೆ ಯಾವ್ಯಾವುದಕ್ಕೆ ಎಷ್ಟು ಪ್ರಮಾಣದಲ್ಲಿ ಆಗುತ್ತಿದೆ ಎಂಬ ಮಾಹಿತಿ ನೀಡುವುದು?	2007 ರಿಂದ ಜನವರಿ , 2022 ರವರೆಗೆ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳ ವೆಚ್ಚದ ಮೇಲೆ ಶೆ.1 ರಂತೆ ಒಟ್ಟು ರೂ. 8507.47 ಕೋಟಿಗಳಷ್ಟು ಹಣ ಸಂಗ್ರಹವಾಗಿದೆ.

ಈ ಮೊತ್ತವನ್ನು ಮಂಡಳಿಯ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಭಿತರಿಗಾಗಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಮತ್ತು ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ಬಳಸಲಾಗುತ್ತಿದೆ. ವಿವರ ಈ ಕೆಳಕಂಡಂತಿದೆ:

ಕ್ರ. ಸಂ.	ವಿವರ	ಖರ್ಚು ಮಾಡಿರುವ ಮೊತ್ತ (ರೂ.ಗಳಲ್ಲಿ)
1.	ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಭ್ಯಗಳ ವಿತರಣೆಗಾಗಿ ಮತ್ತು ಕೋವಿಡ್-19 ರ ಒಂದನೇ ಮತ್ತು ಎರಡನೇ ಅಲೆ ಸಂದರ್ಭದಲ್ಲಿ ಪರಿಹಾರ ವಿತರಣೆಗಾಗಿ	3039,66,77,783/-
2.	ಆಡಳಿತಾತ್ಮಕ ವೆಚ್ಚಕ್ಕಾಗಿ	169,01,58,563/-

ಕಾಇ 65 ಎಲ್ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು